ತರೀಕೆರೆಯಲ್ಲಿ ಕ್ರೀಡಾಂಗಣ ನಿರ್ಮಾಣ

593(632)

ಶ್ರೀ ನೀಲಕಂಠಪ್ಪ ಬಿ.ಆರ್.(ತರೀಕೆರೆ): ಮಾನ್ಯ ಯುವಜನ ಸೇವೆಗಳು ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತರೀಕೆರೆಯಲ್ಲಿ ಕ್ರೀಡಾಂಗಣ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಈ ಯೋಜನೆಗೆ ಬೇಕಾಗಿರುವ ಜಮೀನನ್ನು ಒದಗಿಸಲಾಗಿದೆಯೆ?

ಇ) ಈ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಯುವಜನ ಸೇವೆಗಳು ಮತ್ತು ಕ್ರೀಡಾ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.

ಇ) ಅಂದಾಜು ಪಟ್ಟಿ, ನೀಲಿ ನಕ್ಷೆ ತಯಾರಿಸಲು ಕರ್ನಾಟಕ ಭೂ ಸೇನಾ ನಿಗಮ, ಇವರನ್ನು ಕೋರಲಾಗಿದ್ದು, ಅವು ಲಭ್ಯವಾದ ನಂತರ ಆಡಳಿತಾತ್ಮಕ ಮಂಜೂರಾತಿಯೊಂದಿಗೆ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಹೊನ್ನಾವರ ಸಾಮಾಜಿಕ ಅರಣ್ಯಗಳ ಅಭಿವೃದ್ಧಿ.

594(590)

ಶ್ರೀ ನಾಯಕ್ ಜೆ.ಡಿ. (ಭಟ್ಕಳ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು, ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1999-2000ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆ, ಹೊನ್ನಾವರ ಸಾಮಾಜಿಕ ಅರಣ್ಯ ವಲಯದಲ್ಲಿ (ಸಾಮಾಜಿಕ ಅರಣ್ಯ) ವಿವಿಧ ಅನುದಾನಗಳ ಅಡಿಯಲ್ಲಿ ಖರ್ಚಾದ ಮೊತ್ತವೆಷ್ಟು;

ಆ) 1999-2000 ವರೆಗೆ ಭಟ್ಕಳ ಹಾಗೂ ಹೊನ್ನಾವರ ತಾಲ್ಲೂಕಿನ ಯಾವ